**ಓಎಸ್ ನಂಃ 27/2020**
**ಡಿಡಬ್ಲೂಃ 1**

**ಸಾಕ್ಷಿಗೆ ದಿನಾಂಕ 09-01-2026 ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು**

ಮುಂದುವರಿದ ಪಾಟೀ ಸವಾಲುಃ ವಾದಿ ಪರ ಶ್ರೀ. ವಿ.ಎಮ್.ಎ. ವಕೀಲರಿಂದ

ವಾದಿಯ ಗಂಡ ನಿಮ್ಮ ತಂದೆಯಿಂದ ದಬ್ಬಾಳಿಕೆ ಮಾಡಿ ಖರೀದಿ ಪತ್ರದ ಮೇಲೆ ಸಹಿ ಪಡೆದಿದ್ದಾರೆಂದು ನಿಮ್ಮ ಪ್ರಮಾಣ ಪತ್ರ ಮತ್ತು ತಕರಾರಿನಲ್ಲಿ ನಮೂದು ಮಾಡಿದ್ದೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನಿಮ್ಮ ಪ್ರಮಾಣ ಪತ್ರದಲ್ಲಿ ಬರೆಸಿರುವ ಸಂಗತಿಗಳನ್ನು ನೀವು ಬರೆಸಿದ್ದೀರಾ ಅಥವಾ ಬೇರೆ ಯಾರೋ ಬರೆಸಿದ್ದಾರಾ ಎಂದರೆ ಸಾಕ್ಷಿ ನಾನು ಹೇಳಿ ಬರೆಸಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಗೆ ಈಗ ಪ್ರಮಾಣಪತ್ರವನ್ನು ತೋರಿಸಲಾಗಿ ಸಾಕ್ಷಿ ಅದನ್ನು ನಾನೇ ಬರೆಸಿದ್ದೇನೆ ಎಂದು ನುಡಿಯುತ್ತಾರೆ. ಸರ್ವೆ ನಂಬರ್ 319ರ ಸರ್ವೆಗಾಗಿ ನೀವೇ ಅರ್ಜಿ ನೀಡಿದ್ದೀರಿ ಎಂದರೆ ಸಾಕ್ಷಿ ನಾನೇ ಸರ್ವೆ ನಂಬರ್ 318 ಮತ್ತು 319ರ ಸರ್ವೆಗಾಗಿ ADLR ಕಛೇರಿಯಲ್ಲಿ ಅರ್ಜಿ ನೀಡಿದ್ದೇನೆ ಎಂದು ನುಡಿಯುತ್ತಾರೆ. ಸದರಿ ಅರ್ಜಿಯ ನೋಟೀಸು ವಾದಿಗೆ ADLR ಕಛೇರಿಯಿಂದ ಬಂದಿಲ್ಲ ಎಂದರೆ ನನಗೆ ಗೊತ್ತಿಲ್ಲ. ನೀವು ಮತ್ತು ಕಂದಾಯ ಅಧಿಕಾರಿಗಳು ಸೇರಿ ದಾವಾ ಆಸ್ತಿಯ ಕುರಿತು ಒಂದು ಸುಳ್ಳು ಕಂದಾಯ ದಾಖಲೆಗಳನ್ನು ಸೃಷ್ಟಿಸಲು ಪ್ರಯತ್ನಪಟ್ಟಿದ್ದೀರಿ ಎಂದರೆ ಸರಿಯಲ್ಲ. ನಿಮ್ಮ ತಂದೆ ವಾದಿಗೆ ದಾವಾ ಆಸ್ತಿಯನ್ನು ಮಾರಾಟ ಮಾಡಿದ್ದರೂ ಸಹ ನೀವು ತಪ್ಪಾಗಿ ಅರ್ಜಿ ನೀಡಿ ಕಂದಾಯ ದಾಖಲೆಗಳನ್ನು ತಪ್ಪಾಗಿ ಸೃಷ್ಟಿಸಿದ್ದೀರಿ ಎಂದರೆ ಸರಿಯಲ್ಲ. ನಿಮ್ಮ ತಂದೆ ದಾವಾ ಆಸ್ತಿಯನ್ನು ಮಾರಾಟ ಮಾಡಿದ ನಂತರ ವಾದಿಯ ಗಂಡ ಸದರಿ ಆಸ್ತಿಯ ಕಬ್ಜಾದಲ್ಲಿದ್ದು ಆತ ತೀರಿಕೊಂಡ ನಂತರ ವಾದಿ ಈಗ ಕಬ್ಜಾದಲ್ಲಿದ್ದಾರೆ ಎಂದರೆ ಸರಿಯಲ್ಲ. ವಾದಿಯ ಗಂಡ ದಾವಾ ಆಸ್ತಿಯನ್ನು ಖರೀದಿ ಮಾಡಿದ ನಂತರ ಆತನ ಹೆಸರು ಕಂದಾಯ ದಾಖಲೆಗಳಲ್ಲಿ ನಮೂದಾಗಿತ್ತು ಎಂದರೆ ಸರಿಯಲ್ಲ. ನಿಮ್ಮ ತಂದೆ ದಾವಾ ಆಸ್ತಿಯನ್ನು ಮಾರಾಟ ಮಾಡಿದ ವಿಷಯ ನಿಮಗೆ ಮೊದಲಿನಿಂದಲೇ ಗೊತ್ತಿತ್ತು ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮಾರಾಟ ಆದ ನಂತರ ನೀವು ಎಂದಿಗೂ ದಾವಾ ಆಸ್ತಿಯ ಕಬ್ಜಾದಲ್ಲಿಲ್ಲ ಎಂದರೆ ಸರಿಯಲ್ಲ. ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಈ ದಾವೆಯನ್ನು ಸಲ್ಲಿಸಿದ ನಂತರ ನಿಮ್ಮ ಅನುಕೂಲದ ಪ್ರಕಾರ ನ್ಯಾಯಾಲಯಕ್ಕೆ ಒಂದು ಅರ್ಜಿ ಸಲ್ಲಿಸಿ ನಿಮ್ಮ ತಂದೆಯ ತಪ್ಪಾದ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೀರಿ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು,
ಚಿತ್ತಾಪೂರ.